# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಯಲಹಂಕ ವಲಯ

## ಸಹಾಯಕ ಕಾರ್ಯಪಾಲಕ ಅಭಿಯಂತರರು ಕಛೇರಿ, ಯಲಹಂಕ ಉಪ ವಿಭಾಗ

## ವಾರ್ಡ್ ನಂ. 02 (ಚೌಡೇಶ್ವರಿ) ವಾರ್ಡ್ ಕಮಿಟಿ ಸಭೆ.

ದಿನಾಂಕ: 19-12-2020 ರಂದು ಬೆಳ್ಳಿಗೆ 10.00 ಗಂಟೆಗೆ ವಾರ್ಡ್ ನಂ-02 ಚೌಡೇಶ್ವರಿ ವಾರ್ಡ್ ಸಮಿತಿಯ ಮಾನ್ಯ ನೋಡೆಲ್ ಅಧಿಕಾರಿಗಳು ಹಾಗೂ ಕಾರ್ಯದರ್ಶಿಗಳು ಜೊತೆ ಯಲಹಂಕ ವಿಭಾಗ ಕಚೇರಿಯಲ್ಲಿರುವ ವಾರ್ಡ್ ಕಛೇರಿಯಲ್ಲಿ ನೆಡೆದ ವಾರ್ಡ್ ಕಮಟಿ ಸಭೆಯ ನಡುವಳಿಗಳು

| ಕ್ರ.ಸಂ | ಸಭೆಗೆ ಹಾಜರಾಗಿರುವ ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳು | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಷರಾ |
|---|---|---|---|
| 1 | ಶ್ರೀ.ಅಶೋಕ್ ಪಾಟೀಲ್ ಸಹಾಯಕ ಕಾರ್ಯಪಾಲಕ ಅಭಿಯಂತರರು ಹಾಗೂ ನೊಡೆಲ್ ಅಧಿಕಾರಿಗಳು. | ಶ್ರೀ. ಚಂದ್ರಪ್ಪ ವಿ. (ವಲಯ ಅರಣ್ಯಾದಿಕಾರಿಗಳು) | |
| | | ಶ್ರೀ.ಲಿಂಗರಾಜು (ಹಿ.ಆ.ಪ) | |
| | | ಶ್ರೀ.ಬಾಬು ರೆಡ್ಡಿ (ವಿದ್ಯುತ್) | |
| | | ಶ್ರೀ.ಸುಂದರೇಶ್ (ಸ.ಅ)(ಯೋಜನೆ) | |
| 2 | ಶ್ರೀ.ಚಂದ್ರಕಾಂತ್ ರಾಜ್ ಪಿ.ಎ ಸಹಾಯಕ ಅಭಿಯಂತರರು ಹಾಗೂ ಸಮಿತಿ ಕಾರ್ಯದರ್ಶಿ | ಶ್ರೀ.ಶ್ರೀನಿವಾಸ (ಬ್ಯನಿ.ಗಾ) | |
| | | ಶ್ರೀ.ಮಲ್ಯಾದ್ರಿ (ತೋಟಗಾರಿಕೆ) | |
| | | ಶ್ರೀ.ನಂದಶ್ರೀ. (ಕಿ.ಆ.ಪ) | |

ಶ್ರೀ. ಚಂದ್ರಕಾಂತ್‌ರಾಜ್ ಪಿ.ಎ ಸಹಾಯಕ ಅಭಿಯಂತರರು ವಾರ್ಡ್ ನಂ -02 ಹಾಗೂ ಕಾರ್ಯದರ್ಶಿಗಳು ವಾರ್ಡ್ ಸಮಿತಿ ರವರು ಸಭೆಗೆ ಹಾಜರಿದ್ದ ನೊಡೆಲ್ ಅಧಿಕಾರಿಗಳು ಹಾಗೂ ಬಾಗವಹಿಸಿದ್ದ ಎಲ್ಲಾ ಅಧಿಕಾರಿಗಳನ್ನು ಸಭೆಗೆ ಸ್ವಾಗತಿಸುತ್ತಾ ಸಭೆ ಪ್ರಾರಂಭಿಸಲು ನೊಡೆಲ್ ಅಧಿಕಾರಿರವರನ್ನು ಕೋರಲಾಯಿತು ಮತ್ತು ಸಬೆಯಲ್ಲಿ ಚರ್ಚಿಸಬೇಕಾದ ವಿಷಯಗಳ ಬಗ್ಗೆ ತಿಳಿಸಲಾಯಿತು.

ಶ್ರೀ ಅಶೋಕ್ ಪಾಟೀಲ್, ಸಹಾಯಕ ಕಾರ್ಯಪಾಲಕ ಅಭಿಯಂತರರು ಹಾಗೂ ಸಮಿತಿಯ ನೊಡೆಲ್ ಅಧಿಕಾರಿಯವರು ಸಬೆಯನ್ನು ಪ್ರಾರಂಭಿಸಿದರು.

1. ಮೊದಲನೇದಾಗಿ ವಾರ್ಡ್ ನಂ -02ರ ವ್ಯಾಪ್ತಿಯಲ್ಲಿ ಈ ಹಿಂದಿನ ಸಭೆಯಲ್ಲಿ ದಿನಾಂಕ: 05-12-2020ರ ಸಭೆಯಲ್ಲಿ ನಡೆದ ವಿಷಯಗಳ ಬಗ್ಗೆ ಚರ್ಚಿಸಲಾಯಿತು.
2. ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶದಂತೆ ವಾರ್ಡ್‌ಗಳ ವ್ಯಾಪ್ತಿಯಲ್ಲಿ ಸಾರ್ವಜನಿಕ ಶೌಚಾಲಯಗಳನ್ನು ನಿರ್ಮಾಣ ಮಾಡುವಂತೆ ಸೂಚಿಸಿರುವುದರಿಂದ ವಾರ್ಡ್ ನಂ-02ರ ವ್ಯಾಪ್ತಿಯಲ್ಲಿ ಕೊಂಡಪ್ಪ ಬಡಾವಣೆ, ಯಲಹಂಕ ನ್ಯೂ ಟೌನ್ 5ನೇ ಹಂತ ಮತ್ತು ರೈಲ್ವೆ ಸ್ಟೇಷನ್ ಹತ್ತಿರ ಸಾರ್ವಜನಿಕ ಶೌಚಾಲಯಗಳನ್ನು ನಿರ್ಮಾಣ ಮಾಡಲು ಸಭೆಯಲ್ಲಿ ಚರ್ಚಿಸಲಾಯಿತು.
3. ವಾರ್ಡ್ ನಂ -02ರ ವ್ಯಾಪ್ತಿಯಲ್ಲಿರುವ ಯಲಹಂಕ ಒಲ್ಡ್ ಟೌನ್‌ನಲ್ಲಿ ಹಾಗೂ ಯಲಹಂಕ ಉಪನಗರ 5ನೇ ಹಂತದಲ್ಲಿ ಸ್ಟ್ರೀಟ್ ಲೈಟ್‌ಗಳು ಉರಿಯುತ್ತಿಲ್ಲವೆಂದು ಸಾರ್ವಜನಿಕರು ದೂರು ನೀಡಿದ್ದು, ಅದರಂತೆ ಸದರಿ ಜಾಗದಲ್ಲಿ ಸ್ಟ್ರೀಟ್ ಲೈಟ್‌ಗಳನ್ನು ಸರಿಪಡಿಸಲು ಸಂಬಂದಿಸಿದ ಅಧಿಕಾರಿಗಳಿಗೆ ಸೂಚಿಸಲಾಯಿತು. (ಕ್ರಮ: ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್).

ಪು.ತಿ.ನೋ

4. ವಾರ್ಡ್ ನಂ-02ರ ವ್ಯಾಪ್ತಿಯಲ್ಲಿ ಪೌರ ಕಾರ್ಮಿಕರಿಗೆ ಅಗತ್ಯ ವಸ್ತುಗಳನ್ನು ಪೂರೈಸುವಂತೆ ಹಾಗೂ ಬ್ಲಾಕ್ ಸ್ಪಾಟ್‌ಗಳ ಜಾಗದಲ್ಲಿ ಕಸವನ್ನು ಸಮರ್ಪಕವಾಗಿ ಘನತ್ಯಾಜ್ಯ ವಿಲೇವಾರಿ ಸಮರ್ಪಕವಾಗಿ ನಿರ್ವಹಣೆ ಮಾಡುವಂತೆ ನೋಡಲ್ ಅಧಿಕಾರಿಗಳು ಸಂಬಂದಿಸಿದ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚನೆ ನೀಡಿದರು.
   (ಕ್ರಮ : ಸ.ಕಾ.ಅ (ಎಸ್.ಡಬ್ಲ್ಯೂ.ಎಂ)ಯಲಹಂಕ ವಿಭಾಗ)

5. ವಾರ್ಡ್ ನಂ-2ರ ಪರಿಮಿತಿಯಲ್ಲಿ ಡಾ. ಶಾಲಿನಿಯವರು (ಎ.ಪಿ.ಟಿ.ಎಸ್. ಕೋವಿಡ್ ವೈದ್ಯಾಧಿಕಾರಿಗಳು) ರವರು ಮಾತನಾಡಿ ಕೋವಿಡ್ ಪರೀಕ್ಷೆಗೆ ಸಂಬಂದಿಸಿದಂತೆ, ಸಾರ್ವಜನಿಕರು ಆಸಕ್ತಿ ತೋರಿಸುತ್ತಿರುವುದಿಲ್ಲ ವೆಂದು ಹಾಗೂ ನಮಗೆ ಪ್ರತಿದಿನ 320 ಜನ ಟಾರ್ಗೇಟ್ ನೀಡುತ್ತಿದ್ದು, ವಾರ್ಡ್ ನಂ-02 ರಲ್ಲಿರುವ ಸಾರ್ವಜನಿಕರು ಕೊವಿಡ್ ಪರೀಕ್ಷೆ ಮಾಡಿಸಿಕೊಳ್ಳಲು ಮನಹೊಲಿಕೆ ಮಾಡುವಂತೆ ಸಭೆಯಲ್ಲಿ ಮನವಿ ಸಲ್ಲಿಸಿದರು. (ಕ್ರಮ : ಆರೋಗ್ಯಾದಿಕಾರಿಗಳು ಬಿ.ಬಿ.ಎಂ.ಪಿ ಯಲಹಂಕ ವಲಯ)

ಈ ಮೇಲ್ಕಂಡ ಎಲ್ಲಾ ಅಂಶಗಳನ್ನು ಕೂಲಂಕುಷವಾಗಿ ಚರ್ಚಿಸಲಾಯಿತು, ಹಾಗೂ ಸಭೆಯಲ್ಲಿ ಹಾಜರಿದ್ದ ಎಲ್ಲಾ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ವಂದನೆಗಳನ್ನು ಸಲ್ಲಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ
ವಾರ್ಡ್ ಕಮಿಟಿ, ವಾರ್ಡ್ ನಂ. 02( ಚೌಡೇಶ್ವರಿ)

24/12
ನೊಡೆಲ್ ಅಧಿಕಾರಿಗಳು
ವಾರ್ಡ್ ಕಮಿಟಿ, ವಾರ್ಡ್ ನಂ. 02(ಚೌಡೇಶ್ವರಿ)

ಪ್ರತಿಯನ್ನು:

1. ಮಾನ್ಯ ಜಂಟಿ ಆಯುಕ್ತರು ಯಲಹಂಕ ವಲಯರವರ ಮಾಹಿತಿಗಾಗಿ.
2. ಮಾನ್ಯ ಮುಖ್ಯ ಅಭಿಯಂತರರು ಯಲಹಂಕ ವಲಯರವರ ಮಾಹಿತಿಗಾಗಿ.
3. ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯರವರ ಮಾಹಿತಿಗಾಗಿ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು, (ವಿದ್ಯುತ್) ಯಲಹಂಕ ವಲಯ ರವರ ಮಾಹಿತಿಗಾಗಿ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ ಯಲಹಂಕ ವಿಭಾಗ ರವರ ಮಾಹಿತಿಗಾಗಿ.
6. ಕಛೇರಿ ಕಡತಕ್ಕೆ.